# 15 ವರ್ಷಗಳ ನಿರಂತರ ಸೇವೆ : ವಿದ್ಯಾರ್ಥಿಗಳ ಪಾಲಿನ 'ಜ್ಞಾನದಾನಿ'ಯಾದ ಜೋಗದ್ ನಾರಾಯಣಪ್ಪ



ಅ.ಶ. ಸುದ್ದಿ ಗಂಗಾವತಿ

**ಗಂಗಾವತಿ: "ಶಿಕ್ಷಣವೇ ಜೀವನದ ಬುನಾದಿ ಎನ್ನುವ ಮಾತು ಸತ್ಯ, ಬಡತನದಲ್ಲಿ ಬೆಳೆದವರು ಕಷ್ಟದ ಬೆಲೆ ಬಲ್ಲವರು ಎನ್ನುವುದಕ್ಕೆ ಜೋಗದ್ ನಾರಾಯಣಪ್ಪನವರೇ ಸಾಕ್ಷಿ" ಎಂದು ಶಾಸಕ ಜನಾರ್ದನ ರೆಡ್ಡಿ ಬಣ್ಣಿಸಿದರು. ನಗರದ ಗ್ರಾಮ ದೇವತೆ ಶ್ರೀ ದುರ್ಗಾದೇವಿ ದೇವಸ್ಥಾನದ ಆವರಣದಲ್ಲಿ ಸೋಮವಾರ ಆಯೋಜಿಸಿದ್ದ ಜೋಗದ್ ನಾರಾಯಣಪ್ಪ ಹಾಗೂ ಅವರ ಕುಟುಂಬದ ವತಿಯಿಂದ ಸರ್ಕಾರಿ ಶಾಲಾ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ "ನಾರಾಯಣಪ್ಪ ಅವರು ಕಳೆದ 15 ವರ್ಷಗಳಿಂದ ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ.**

ಕೇವಲ ಸಮಾಜದ ಮೇಲಿನ ಕಳಕಳಿಯಿಂದ ವಿದ್ಯಾರ್ಥಿಗಳಿಗೆ ನೋಟ್‌ಬುಕ್ ವಿತರಿಸುತ್ತಿರುವುದು ಅತ್ಯಂತ ಶ್ಲಾಘನೀಯ. ಅವರ ಈ ಸೇವಾ ಮನೋಭಾವ ಇಂದಿನ ಸಮಾಜಕ್ಕೆ ದೊಡ್ಡ ಮಾದರಿಯಾಗಿದೆ" ಎಂದು ಪ್ರಶಂಸಿಸಿದರು.

ಬಡತನದ ಅನುಭವವೇ ಪ್ರೇರಣೆ: ಪ್ರಸ್ತಾವಿಕವಾಗಿ ಮಾತನಾಡಿದ ಜೋಗದ್ ನಾರಾಯಣಪ್ಪ ಅವರು, ತಮ್ಮ ಬಾಲ್ಯದ ಕಷ್ಟದ ದಿನಗಳನ್ನು ಭಾವುಕರಾಗಿ ಸ್ಮರಿಸಿದರು. "ನಾನು ಅತ್ಯಂತ ಬಡ ಕುಟುಂಬದಲ್ಲಿ ಬೆಳೆದವನು. ಶಿಕ್ಷಣ ಪಡೆಯಲು ಅನುಭವಿಸಿದ ಕಷ್ಟಗಳು ನನಗೆ ಇಂದಿಗೂ ನೆನಪಿವೆ. ಆರ್ಥಿಕ ಸಂಕಷ್ಟ ಶಿಕ್ಷಣಕ್ಕೆ ತಡೆಯಾಗಬಾರದು ಎಂಬ ದೃಢ ನಿರ್ಧಾರದಿಂದ, ಸರ್ಕಾರಿ ಶಾಲೆಯ ಮಕ್ಕಳಿಗೆ ನನ್ನಿಂದ ಸಾಧ್ಯವಿರುವ ಸಣ್ಣ ಸಹಾಯವನ್ನು ಕಳೆದ ಒಂದೂವರೆ ದಶಕದಿಂದ ಮಾಡುತ್ತಿದ್ದೇನೆ" ಎಂದು ತಿಳಿಸಿದರು.

ಮಾಜಿ ಶಾಸಕ ಪರಣ್ಣ ಮುನವಳ್ಳಿ ಮಾತನಾಡಿ, "ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಪೂರಕವಾಗಿ ನಾರಾಯಣಪ್ಪ ಅವರು ಕೈಗೊಂಡಿರುವ ಈ ಕಾರ್ಯ ನಿರಂತರವಾಗಿರಲಿ" ಎಂದು ಶುಭ ಹಾರೈಸಿದರು.

ಶಿಕ್ಷಣ ಪ್ರೇಮಿ ನೆಕ್ಕಂಟಿ ಸೂರಿಬಾಬು ಮಾತನಾಡಿ, "ಶಿಕ್ಷಣದ ಶಕ್ತಿಯನ್ನು ಅರಿತ ವ್ಯಕ್ತಿ ಮಾತ್ರ ಇಂತಹ ಸಮಾಜಮುಖಿ ಕೆಲಸ ಮಾಡಲು ಸಾಧ್ಯ" ಎಂದು ನುಡಿದರು.

ಈ ಕಾರ್ಯಕ್ರಮದ ಮೂಲಕ ನೂರಾರು ವಿದ್ಯಾರ್ಥಿಗಳು ನೋಟ್‌ಬುಕ್‌ಗಳನ್ನು ಪಡೆದು ಸಂತಸ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಮಾಜಿ ಸಚಿವ ಮಲ್ಲಿಕಾರ್ಜುನ್ ನಾಗಪ್ಪ, ಮಾಜಿ ಸಂಸದ ಶಿವರಾಮೇಗೌಡ, ಪ್ರಮುಖರಾದ ಸಿಂಗನಾಳ ವಿರುಪಾಕ್ಷಪ್ಪ, ಅಮರ್ ಜ್ಯೋತಿ ನರಸಪ್ಪ, ವೀರಭದ್ರಪ್ಪ ನಾಯಕ್, ಹನುಮಂತಪ್ಪ ನಾಯಕ್, ಶಿಕ್ಷಣ ಅಧಿಕಾರಿ ನಟೇಶ್, ಹೊಸಮನಿ ಮಲ್ಲೇಶಪ್ಪ ಸೇರಿದಂತೆ ಹಲವು ಗಣ್ಯರು, ಶಿಕ್ಷಕರು, ಪೋಷಕರು ಮತ್ತು ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಭ್ರಷ್ಟಾಚಾರ ನಿಯಂತ್ರಣಕ್ಕೆ ಶೀಘ್ರದಲ್ಲೇ ಖಾಯಂ ಪರಿಹಾರ :ಗೃಹ ಸಚಿವ ಪ್ರಿಯಾಂಕ್ ಖರ್ಗೆ

ಅ.ಶ. ಸುದ್ದಿ ಬೆಂಗಳೂರು

**ಬೆಂಗಳೂರು: ನಾಗರಿಕರಿಗೆ ತೊಂದರೆ ನೀಡಿ, ಲಂಚ ಕೇಳುವ ಭ್ರಷ್ಟಾಚಾರದ ವ್ಯವಸ್ಥೆಗೆ ಮೇಲ್ಮಟ್ಟದಿಂದಲು ಕಡಿವಾಣ ಹಾಕಲು ಖಾಯಂ ವ್ಯವಸ್ಥೆಯನ್ನು ಶೀಘ್ರವೇ ರೂಪಿಸಲಾಗುವುದು ಎಂದು ಗೃಹ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದ ಪೊಲೀಸರು ಜೈಪುರದಲ್ಲಿ ಲಂಚ ಕೇಳಿ ಸಿಕ್ಕಿಬಿದ್ದಿರುವುದು ಒಳ್ಳೆಯ ಬೆಳವಣಿಗೆಯಂತೂ ಅಲ್ಲ, ಇದರಿಂದ ರಾಜ್ಯದ ಜನತೆಗೆ ಧಕ್ಕೆಯುಂಟಾಗಿದೆ. ರಕ್ಷಕರೇ ಭಕ್ಷಕರಾಗುವುದನ್ನು ಸಹಿಸಲಾಗುವುದಿಲ್ಲ ಎಂದರು.**



ಜೈಪುರದಲ್ಲಿ ಸಿಕ್ಕಿಬಿದ್ದ ಅಧಿಕಾರಿ ಗಳನ್ನು ಈಗಾಗಲೇ ಅಮಾನತು ಗೊಳಿಸಲಾಗಿದೆ. ಉನ್ನತಾಧಿಕಾರಿಗಳು ಇದರಲ್ಲಿ ಭಾಗಿಯಾಗಿದ್ದಾರೆಯೇ ಎಂಬುದನ್ನು ಪರಿಶೀಲಿಸಲು ಆದೇಶಿಸಲಾಗಿದೆ ಎಂದರು.ವ್ಯವಸ್ಥೆ ತುಕ್ಕು ಹಿಡಿದಿದೆ. ಅದನ್ನು ಸರಿಪಡಿಸಲು ಸ್ವಲ್ಪ ಸಮಯಬೇಕು. ಭ್ರಷ್ಟಾಚಾರವನ್ನು ಬೇರು ಮಟ್ಟದಿಂದ ಕಿತ್ತೊಗೆಯಬೇಕಿದೆ. ಇದನ್ನು ಕೆಳ ಹಂತದಲ್ಲಷ್ಟೇ ಅಲ್ಲ ಮೇಲಟ್ಟದಿಂದಲೂ ಸರಿಪಡಿಸಬೇಕಿದೆ. ಯಾರೇ ಹಣ ಕೇಳಿದರೂ ನಮಗೆ ದೂರು ನೀಡಿ ಎಂದು ಮುಖ್ಯಮಂತ್ರಿಯವರು ಹೇಳಿದ್ದಾರೆ. ಪೊಲೀಸ್ ಠಾಣೆಗಳಲ್ಲಿ ಜನರಿಗೆ ತೊಂದರೆ ಕೊಡುವುದು, ಅವ್ಯವಹಾರ ಮಾಡುವುದು, ಲಂಚ ಕೇಳುವುದು, ಕರ್ತವ್ಯ ನಿರ್ವಹಿಸುವಾಗ ಭ್ರಷ್ಟಚಾರ ನಡೆಸುವುದು ಕಂಡು ಬಂದರೆ, ಜನರು ನೇರವಾಗಿ ನಮಗೆ ದೂರು ನೀಡುವ ವ್ಯವಸ್ಥೆಯನ್ನು ಗೃಹ ಇಲಾಖೆಯಲ್ಲಿ ಜಾ–ರಿಗೊಳಿಸಲಾಗುವುದು ಎಂದು ಹೇಳಿದರು. ನನ್ನ ಇಲಾಖೆಯ ಆಗೂ– ಹೋಗುಗಳ ಹೊಣೆಗಾರಿಕೆಯನ್ನು ತೆಗೆದುಕೊಳ್ಳಲು ನಾನು ಸಿದ್ಧನಿದ್ದೇನೆ. ಅದೇ ರೀತಿ ಬಿಜೆಪಿ ಸರ್ಕಾರದಲ್ಲಿ ಗೃಹ ಸಚಿವರಾಗಿದ್ದ ಆರ್.ಅಶೋಕ್, ಬಸವರಾಜ ಬೊಮಾಯಿ, ಅರಗ ಜ್ಞಾನೇಂದ್ರ ಅವರ ಕಾಲದಲ್ಲಿ ಪೊಲೀಸ್ ಠಾಣೆಗಳಲ್ಲಿ ಭ್ರಷ್ಟಚಾರ ಇರಲಿಲ್ಲವೇ ಈಗ ನಮ ಅಧಿಕಾರಿಗಳು ತಪ್ಪು ಮಾಡಿದರೆ, ನಾನು ಕ್ರಮ ಕೈಗೊಳ್ಳುವುದಾಗಿ ಧೈರ್ಯವಾಗಿ ಹೇಳುತ್ತಿದ್ದೇನೆ. ಇದೇ ರೀತಿ ಅಶೋಕ್ ಅವರು ಒಂದೇ ಒಂದು ಹೇಳಿಕೆಯನ್ನು ಜವಾಬ್ದಾರಿಯುತವಾಗಿ ನೀಡಿದ್ದರೆ ತೋರಿಸಲಿ ಎಂದು ಸವಾಲು ಹಾಕಿದರು. ಹಿಂದೆ ಅವರ ಸರ್ಕಾರದಲ್ಲಿ ಲಂಚಪಡೆಯುವಾಗ ಶಾಸಕರೇ ಲೋಕಾಯುಕ್ತ ದಾಳಿಗೆ ಸಿಲುಕಿದ್ದರು. ಅದಕ್ಕೆ ಬಿಜೆಪಿಯ ನಾಯಕರು ಏನು ಹೇಳುತ್ತಾರೆ. ಅದರ ಬಗ್ಗೆಯೂ ಅವರ ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಲಿ. ಬೇರೆಯವರ ಬಗ್ಗೆ ಮಾತನಾಡುವಾಗ ತಮ ಹೊಣೆಗಾರಿಕೆಗಳ ಬಗ್ಗೆ ಕೂಡ

ಅಜಾತ ಶತ್ರು
ದಿನಪತ್ರಿಕೆಯನ್ನು
ತಪ್ಪದೆ ಓದಿರಿ.

# ವಕೀಲರನ್ನು ನಿಂದಿಸಿದ ಪ್ರಕರಣ ; ಪಿಡಿಓ ವಿರುದ್ಧ ದೂರು



ಅ.ಶ. ಸುದ್ದಿ ಕಾರಟಗಿ

**ಕಾರಟಗಿ: ತಾಲೂಕಿನ ಯರಡೋಣ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಯಾದ ಶಿವರಾಜ್ ಅವರು ಗಂಗಾವತಿ ವಕೀಲರಾದ ಮಲ್ಲೇಶಪ್ಪ ಅವರನ್ನು ಆವಾಚ್ಯ ಶಬ್ದಗಳಿಂದ ನಿಂದಿಸಿರುವ ಘಟನೆ ವೈರಲ್ ಆದ ಬೆನ್ನಲ್ಲೇ ರಾಜ್ಯ ವ್ಯಾಪ್ತಿಯಲ್ಲಿ ವಕೀಲರ ಆಕ್ರೋಶಕ್ಕೆ ಕಾರಣವಾಗಿದೆ.**

ಪರಿಶಿಷ್ಟ ಜಾತಿಯ ಜನಾಂಗಕ್ಕೆ ಮೀಸಲಿಟ್ಟಿರುವ ಅನುದಾನ ವಿದ್ಯಾರ್ಥಿಗಳಿಗಾಗಿ ಖರ್ಚು ಮಾಡಲು ಹಿಂದೇಟು ಹಾಕುತ್ತಿರುವ ಪಿಡಿಓ ಅವರನ್ನು ಪ್ರಶ್ನೆ ಮಾಡಿದ ವಕೀಲರಾದ ಮಲ್ಲೇಶಪ್ಪ ಅವರಿಗೆ ಆಸಂವಿಧಾನಿಕ ಪದ ಬಳಸಿ ನಿಂದಿಸಿದ ಪಿಡಿಓ ವಿರುದ್ಧ ಪ್ರಕರಣ ದಾಖಲು ಮಾಡುವಂತೆ ಗಂಗಾವತಿಯ ಉಪ ವಿಭಾಗದ ಡಿವೈಎಸ್ಪಿ ನ್ಯಾಮಗೌಡರ್ ಅವ–ರಿಗೆ ತಾಲೂಕ ವಕೀಲರ ಸಂಘ ದೂರು ನೀಡಿದೆ. ಈ ಸಂದರ್ಭದಲ್ಲಿ ವಕೀಲರು ಮಾತನಾಡಿ, ಜವಾಬ್ದಾರಿ ಹುದ್ದೆಯಲ್ಲಿರುವ ಪಿಡಿಓ ಅವರು ಅನಾಗರಿಕರಂತೆ ಮಾತನಾಡಿದ್ದಾರೆ.

ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳಿಗೆ ಶಿಕ್ಷಣಕ್ಕಾಗಿ ಮೀಸಲಿರಿಸುವ ಶೇಕಡ 25% ಅನುದಾನವನ್ನು ಸಮರ್ಪಕವಾಗಿ ಬಳಸುವಲ್ಲಿ ಸಂಪೂರ್ಣ ವಿಫಲರಾಗಿದ್ದಾರೆ. ಸೌಲಭ್ಯ ನೀಡಿ ಎಂದು ಕೇಳಿರುವ ವಕೀಲರನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಪಿಡಿಓ ವಿರುದ್ಧ ಅಟ್ರಾಸಿಟಿ ಕಾಯ್ದೆ ಅಡಿಯಲ್ಲಿ ಪ್ರಕರಣ ದಾಖಲು ಮಾಡಬೇಕು ಎಂದು ವಕೀಲರ ಸಂಘ ಒತ್ತಾಯಿಸಿದೆ. ದೂರವಾಣಿಯಲ್ಲಿ ಮಾತನಾಡಿದ ಕಾರಟಗಿ ತಾಲೂಕ ಪಂಚಾಯತ್ ಕಾರ್ಯ ನಿರ್ವಹಕ ಅಧಿಕಾರಿ ಲಕ್ಷ್ಮೀ ದೇವಿ,

ವಕೀಲರ ಸಂಘ ಡಿವೈಎಸ್ಪಿ ಕಚೇರಿಗೆ ತೆರಳಿದ ಸಂದರ್ಭದಲ್ಲಿ ಡಿವೈಎಸ್ಪಿ ಅವರು ಕಾರಟಗಿ ತಾಲೂಕ ಪಂಚಾಯತ್ ಇಓ ರವರ ಜೊತೆ ಮಾತನಾಡಿ ಪಿಡಿಓ ಬಗ್ಗೆ ಮಾಹಿತಿ ಪಡೆದರು ಈ ಸಂದರ್ಭದಲ್ಲಿ ಇಓ ರವರು ಮಾತನಾಡಿ ಪಿಡಿಓ ಗೆ ನೋಟಿಸ್ ಜಾರಿ ಮಾಡಲಾಗಿದೆ, ಈ ಕುರಿತು ಇಲಾಖೆಯ ನಿಯಮಾನುಸಾರ ಕಟ್ಟು ನಿಟ್ಟಿನ ಕ್ರಮ ಕೈಗೊಳ್ಳಲು ಮೇಲಾಧಿಕಾರಿಗೆ ಪತ್ರ ಬರೆಯಲಾಗುತ್ತದೆ ಎಂದು ಭರವಸೆಯನ್ನು ನೀಡಿದ್ದಾರೆ. ಈ ಸಂದರ್ಭದಲ್ಲಿ ವಕೀಲಾರದ ರಾಜು ಗುಂಡೂರು ಮಲ್ಲೇಶಪ್ಪ, ಹುಸೇನಪ್ಪ,ಮಾರುತಿ, ವೀರೇಶ್ ಈಳಿಗನೂರು ಸೇರಿದಂತೆ ಹಲವು ಹಿರಿಯ ವಕೀಲರು ಇದ್ದರು.

# ಅಳವಂಡಿ ಪೊಲೀಸರಿಂದ ಕಾನೂನು ವಿದ್ಯಾರ್ಥಿಗಳ ಮೇಲೆ ಹಲ್ಲೆ, ಆರೋಪ: ಸೂಕ್ತ ಕ್ರಮಕ್ಕೆ ಆಗ್ರಹಿಸಿ ಮನವಿ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ತಾಲೂಕಿನ ಅಳವಂಡಿ ಪೊಲೀಸ್ ಠಾಣೆಯಲ್ಲಿ ಕಾನೂನು ವಿದ್ಯಾರ್ಥಿಗಳ ಮೇಲೆ ಹಲ್ಲೆ ನಡೆಸಿರುವ ಆರೋಪ ಕೇಳಿಬಂದಿದ್ದು, ಸಂಬಂಧಪಟ್ಟ ಪೊಲೀಸ್ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಕಾನೂನು ವಿದ್ಯಾರ್ಥಿಗಳು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ (ಎಸ್‌ಪಿ) ಮನವಿ ಸಲ್ಲಿಸಿದ್ದಾರೆ.**




ಅಳವಂಡಿ ಪೊಲೀಸ್ ಠಾಣೆ ವ್ಯಾಪ್ತಿಯ ಬೋಚನಹಳ್ಳಿ ಗ್ರಾಮದಲ್ಲಿ ಸಿವಿಲ್ ವ್ಯಾಜ್ಯಕ್ಕೆ ಸಂಬಂಧಿಸಿದ ವಿಷಯವೊಂದರಲ್ಲಿ ಪೊಲೀಸರು ಮಧ್ಯಪ್ರವೇಶಿಸಿ, ಜೂನ್ 14ರಂದು ರಾತ್ರಿ ಸುಮಾರು 8 ಗಂಟೆಗೆ ಮರಿತಿಮ್ಮಪ್ಪ ಎಂಬ ಯುವಕನನ್ನು ಠಾಣೆಗೆ ಕರೆದುಕೊಂಡು ಹೋಗಿ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಲಾಗಿದೆ. ಈ ವಿಷಯ ತಿಳಿದ ಮರಿತಿಮ್ಮಪ್ಪನ ಸ್ನೇಹಿತರಾದ ಯಲ್ಲಪ್ಪ ಮೇಟಿ ಹಾಗೂ ಬಸವರಾಜ್ ಎಂಬ ಕಾನೂನು ವಿದ್ಯಾರ್ಥಿಗಳು ಠಾಣೆಗೆ ತೆರಳಿ, ಯುವಕನನ್ನು ಯಾವ ಕಾರಣಕ್ಕಾಗಿ ಕರೆದುಕೊಂಡು ಬಂದಿದ್ದಾರೆ ಎಂದು ಪ್ರಶ್ನಿಸಿದ್ದಾರೆ. ಈ ವೇಳೆ ಠಾಣೆಯಲ್ಲಿ ಯುವಕನ ಮೇಲೆ ಹಲ್ಲೆ ನಡೆಯುತ್ತಿರುವುದನ್ನು ತಮ್ಮ ಮೊಬೈಲ್‌ನಲ್ಲಿ ದಾಖಲಿಸಲು ಮುಂದಾದಾಗ, ಪಿಎಸ್‌ಐ ಅವರು ಮೊಬೈಲ್ ಕಸಿದುಕೊಂಡು, ಅಂಗವಿಕಲ ವಿದ್ಯಾರ್ಥಿಯಾದ ಯಲ್ಲಪ್ಪ ಮೇಟಿ ಅವರ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ದೂರಲಾಗಿದೆ.

ಅಲ್ಲದೆ, "ಅವರನ್ನು ಹೊಡೆಯಬೇಡಿ, ನಿಮಗೆ ಹೊಡೆಯುವ ಹಕ್ಕಿಲ್ಲ" ಎಂದು ಪ್ರಶ್ನಿಸಿದ ಬಸವರಾಜ್ ಅವರ ಮೇಲೂ ಪಿಎಸ್‌ಐ ಹಾಗೂ ಇಬ್ಬರು ಪೇದೆಗಳು ಹಲ್ಲೆ ನಡೆಸಿದ್ದಾರೆ ಎಂದು ವಿದ್ಯಾರ್ಥಿಗಳು ಆರೋಪಿಸಿದ್ದಾರೆ. ಈ ಘಟನೆಯನ್ನು ತೀವ್ರವಾಗಿ ಖಂಡಿಸಿರುವ ಕಾನೂನು ವಿದ್ಯಾರ್ಥಿಗಳು, ಹಲ್ಲೆ ನಡೆಸಿದ ಪೊಲೀಸ್ ಅಧಿಕಾರಿಗಳನ್ನು ಕೂಡಲೇ ಅಮಾನತುಗೊಳಿಸಿ, ಪ್ರಕರಣದ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಆಗ್ರಹಿಸಿದ್ದಾರೆ.

ಜೊತೆಗೆ, ಬಾಧಿತ ವಿದ್ಯಾರ್ಥಿಗಳಿಗೆ ಸೂಕ್ತ ಪರಿಹಾರ ಹಾಗೂ ಭದ್ರತೆ ಒದಗಿಸಬೇಕೆಂದು ಮನವಿಯಲ್ಲಿ ಒತ್ತಾಯಿಸಲಾಗಿದೆ. ಈ ಕುರಿತು ಪ್ರತಿಕ್ರಿಯಿಸಿರುವ ಕರ್ನಾಟಕ ವಿದ್ಯಾರ್ಥಿ ಸಂಘಟನೆಯ ಮುಖಂಡ ಉಮೇಶ್ ಬಡಗಿ "ಪೊಲೀಸ್ ಗೂಂಡಾಗಿರಿ ನಿಲ್ಲಬೇಕು. ಜನರ ರಕ್ಷಕರಾಗಿರುವ ಪೊಲೀಸರು ಭಕ್ಷಕರಂತೆ ವರ್ತಿಸುತ್ತಿರುವುದು ಖಂಡನೀಯ. ಈ ಕೃತ್ಯವು ಮಾನವ ಹಕ್ಕುಗಳ ಉಲ್ಲಂಘನೆಯಾಗಿದ್ದು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಅಳವಂಡಿ ಪೊಲೀಸ್ ಠಾಣೆಯ ಪಿಎಸ್‌ಐ ಹಾಗೂ ಸಂಬಂಧಪಟ್ಟ ಪೇದೆಗಳನ್ನು ಕೂಡಲೇ ಅಮಾನತುಗೊಳಿಸಿ ಕಾನೂನು ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ಪೊಲೀಸ್ ಇಲಾಖೆಯ ವಿರುದ್ಧ ಬೃಹತ್ ಮಟ್ಟದ ಹೋರಾಟ ಹಮ್ಮಿಕೊಳ್ಳಲಾಗುವುದು" ಎಂದು ಎಚ್ಚರಿಸಿದ್ದಾರೆ.

# ಇನ್ನರ್ ವೀಲ್ ಸಂಸ್ಥೆಯಿಂದ ಸ್ಯಾನಿಟರಿ ಪ್ಯಾಡ್ ಯಂತ್ರಗಳ ಅಳವಡಿಕೆ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಇನ್ನರ್ ವೀಲ್ ಕ್ಲಬ್ ಕೊಪ್ಪಳ ವತಿಯಿಂದ ಶ್ರೀ ಗವಿಸಿದ್ದೇಶ್ವರ ಗುರುಕುಲ ವಿದ್ಯಾರ್ಥಿನಿಯರ ಪದವಿ ಪೂರ್ವ ವಸತಿ ಕಾಲೇಜು, ಕಾಟ್ರಳ್ಳಿಯಲ್ಲಿ ಆರು ಸ್ಯಾನಿಟರಿ ಪ್ಯಾಡ್ ಇನ್ಸಿನರೇಟರ್ (ಬರ್ನಿಂಗ್) ಯಂತ್ರಗಳನ್ನು ಅಳವಡಿಸಲಾಯಿತು.**



ಈ ಯಂತ್ರಗಳನ್ನು ಸಂಸ್ಥೆಯ ದಾನಿಗಳಾದ ಮಧು ಶೆಟ್ಟರ್, ಸುವರ್ಣ ಶೆಟ್ಟರ್, ಪ್ರತಿಭಾ ಹಿರೇಮಠ, ವಿದ್ಯಾ ಶರಣಪ್ಪ ಸಜ್ಜನ, ಪಾಷಾ ಕಾಟನ್ ಹಾಗೂ ಸುಶೀಲ ಹತ್ತಿ ಅವರ ಸಹಕಾರದಿಂದ ಕೊಡುಗೆಯಾಗಿ ನೀಡಲಾಯಿತು. ವಿದ್ಯಾರ್ಥಿನಿಯರ ಆರೋಗ್ಯ, ಸ್ವಚ್ಛತೆ, ಸುರಕ್ಷತೆ ಹಾಗೂ ಶಿಸ್ತುಬದ್ಧ ವಾತಾವರಣವನ್ನು ಉತ್ತೇಜಿಸುವ ಉದ್ದೇಶದಿಂದ ಈ ಯಂತ್ರಗಳನ್ನು ಅಳವಡಿಸಲಾಗಿದೆ. ಕೊಪ್ಪಳದ "ಪ್ಯಾಡ್ ವುಮನ್" ಎಂದೇ ಖ್ಯಾತರಾಗಿರುವ ಭಾರತಿ ಗುಡ್ಲಾನೂರ್ ಅವರ ಮಾರ್ಗದರ್ಶನದಲ್ಲಿ ಈ ಆರು ಯಂತ್ರಗಳನ್ನು ಸ್ಥಾಪಿಸಲಾಯಿತು. ಅವರು ವಿದ್ಯಾರ್ಥಿನಿಯರಿಗೆ ಯಂತ್ರಗಳ ಉಪಯೋಗದ ಬಗ್ಗೆ ಮಾಹಿತಿ ನೀಡುವುದರ ಜೊತೆಗೆ ಮುಟ್ಟಿನ ಆರೋಗ್ಯ, ಸ್ವಚ್ಛತೆ ಹಾಗೂ ಅದರ ಮಹತ್ವದ ಕುರಿತು ಅರಿವು ಮೂಡಿಸಿದರು.

ಒಟ್ಟು 62,000 ವೆಚ್ಚದಲ್ಲಿ ಅಳವಡಿಸಲಾದ ಈ ಯಂತ್ರಗಳು ಬಳಸಿದ ಸ್ಯಾನಿಟರಿ ಪ್ಯಾಡ್‌ಗಳ ಸುರಕ್ಷಿತ ಹಾಗೂ ಪರಿಸರ ಸ್ನೇಹಿ ವಿಲೇವಾರಿಗೆ ಸಹಕಾರಿಯಾಗಿದ್ದು, ವಿದ್ಯಾರ್ಥಿನಿಯರ ಉತ್ತಮ ಆರೋಗ್ಯ ಮತ್ತು ಶುಚಿತ್ವವನ್ನು ಖಚಿತಪಡಿಸುತ್ತವೆ. ಕಾರ್ಯಕ್ರದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಮಧು ಶೆಟ್ಟರ್ ಅವರು ಮಾತನಾಡಿ, "ಮುಟ್ಟು ಎನ್ನುವುದು ಹೆಣ್ಣಿನ ಸಹಜ ಪ್ರಕ್ರಿಯೆಯಾಗಿದ್ದು, ಇದರ ಬಗ್ಗೆ ಯಾವುದೇ ಸಂಕೋಚ ಹೊಂದುವ ಅಗತ್ಯವಿಲ್ಲ.

ಪ್ರತಿಯೊಬ್ಬ ಹೆಣ್ಣು ಮಗು ಸ್ವಚ್ಛತೆಯ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು. ವಿದ್ಯಾರ್ಥಿನಿಯರು ಉತ್ತಮವಾಗಿ ವಿದ್ಯಾಭ್ಯಾಸ ಮಾಡಿ ಉತ್ತಮ ಫಲಿತಾಂಶ ಪಡೆಯಬೇಕು ಹಾಗೂ ತಮ್ಮ ತಂದೆ–ತಾಯಿಗಳಿಗೆ ಹೆಮ್ಮೆಯ ಮಕ್ಕಳಾಗಬೇಕು" ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಡಾ.ರಾಧಾ ಕುಲಕರ್ಣಿ, ಸುಮಂಗಲ ಹಂಚಿನಾಳ, ಕೋಮಲ ಕುದು–ರಿಮೋತಿ, ಇನ್ನರ್ ವೀಲ್ ಸಂಸ್ಥೆಯ ಮಾಜಿ ಅಧ್ಯಕ್ಷೆಯರು, ಪದಾಧಿಕಾರಿಗಳು, ಸದಸ್ಯೆಯರು, ಯಂತ್ರಗಳನ್ನು ದಾನ ಮಾಡಿದ ದಾನಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

# ಮೋದಿ ಸರ್ಕಾರದ 12 ವರ್ಷದ ಸಾಧನೆಗಳು ದೇಶದ ಅಭಿವೃದ್ಧಿಗೆ ಹೊಸ ದಿಕ್ಕು : ಶಾಸಕ ಗಾಲಿ ಜನಾರ್ದನ ರೆಡ್ಡಿ

ಅ.ಶ. ಸುದ್ದಿ ಕೊಪ್ಪಳ

**ಕೊಪ್ಪಳ: ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ನೇತೃತ್ವದ ಕೇಂದ್ರ ಸರ್ಕಾರ ಕಳೆದ 12 ವರ್ಷಗಳಲ್ಲಿ ದೇಶದ ಸಮಗ್ರ ಅಭಿವೃದ್ಧಿಗೆ ಅನೇಕ ಐತಿಹಾಸಿಕ ಯೋಜನೆಗಳು ಹಾಗೂ ಜನಪರ ಕಾರ್ಯಕ್ರಮಗಳನ್ನು ಜಾರಿಗೊಳಿಸಿದ್ದು, ಬಡವರು, ರೈತರು, ಮಹಿಳೆಯರು, ಯುವಕರು ಹಾಗೂ ಮಧ್ಯಮ ವರ್ಗದ ಜನರ ಜೀವನಮಟ್ಟವನ್ನು ಸುಧಾರಿಸುವಲ್ಲಿ ಮಹತ್ವದ ಸಾಧನೆ ಮಾಡಿದೆ ಎಂದು ಗಂಗಾವತಿ ಶಾಸಕ ಗಾಲಿ ಜನಾರ್ಧನ ರೆಡ್ಡಿ ಹೇಳಿದರು.**




ಕೊಪ್ಪಳ ನಗರದ ಬಿಜೆಪಿ ಕಾರ್ಯಾಲಯದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ದೇಶದ ಆರ್ಥಿಕತೆ ವಿಶ್ವದ ಪ್ರಮುಖ ಆರ್ಥಿಕತೆಗಳಲ್ಲಿ ಒಂದಾಗಿ ಹೊರಹೊಮ್ಮಿದ್ದು, ಭಾರತವು ಜಾಗತಿಕ ಮಟ್ಟದಲ್ಲಿ ತನ್ನ ಪ್ರಭಾವವನ್ನು ಹೆಚ್ಚಿಸಿಕೊಂಡಿದೆ. ರೈತರಿಗೆ ಕಿಸಾನ್ ಸಮ್ಮಾನ್ ನಿಧಿ, ಉಚಿತ ಆಹಾರ ಧಾನ್ಯ ವಿತರಣೆ, ಮಹಿಳಾ ಸಬಲೀಕರಣ, ಮೂಲಸೌಕರ್ಯ ಅಭಿವೃದ್ಧಿ, ಡಿಜಿಟಲ್ ಇಂಡಿಯಾ, ಮೇಕ್ ಇನ್ ಇಂಡಿಯಾ ಸೇರಿದಂತೆ ಹಲವಾರು ಯೋಜನೆಗಳ ಮೂಲಕ ಜನರ ಬದುಕಿನಲ್ಲಿ ಗುಣಾತ್ಮಕ ಬದಲಾವಣೆ ತರಲಾಗಿದೆ ಎಂದು ತಿಳಿಸಿದರು.

ಮೋದಿಯವರ ಆಡಳಿತದಲ್ಲಿ ರಾಷ್ಟ್ರೀಯ ಹೆದ್ದಾರಿಗಳ ವಿಸ್ತರಣೆ, ರೈಲ್ವೆ ಆಧುನೀಕರಣ, ವಿಮಾನ ನಿಲ್ದಾಣಗಳ ಅಭಿವೃದ್ಧಿ, ವಂದೇ ಭಾರತ್ ರೈಲುಗಳ ಸಂಚಾರ, ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಮೂಲಸೌಕರ್ಯಗಳ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲಾಗಿದೆ. ಭಾರತ ಇಂದು ವಿಶ್ವದ ನಾಲ್ಕನೇ ಅತಿದೊಡ್ಡ ಆರ್ಥಿಕತೆಯಾಗಿ ಹೊರಹೊಮ್ಮಿದ್ದು, ಆತ್ಮನಿರ್ಭರ ಭಾರತದ ಕನಸನ್ನು ನನಸಾಗಿಸುವ ದಿಕ್ಕಿನಲ್ಲಿ ದೇಶ ಮುನ್ನಡೆಯುತ್ತಿದೆ ಎಂದು ಹೇಳಿದರು. ನಂತರ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ, ಕೇಂದ್ರ ಸರ್ಕಾರದ ಜನಕಲ್ಯಾಣ ಯೋಜನೆಗಳು ಸಮಾಜದ ಕಟ್ಟಕಡೆಯ ವ್ಯಕ್ತಿಗೂ ತಲುಪುವಂತೆ ಕಾರ್ಯನಿರ್ವಹಿಸುತ್ತಿವೆ ಎಂದು ಹೇಳಿದರು. ಜನಧನ್ ಯೋಜನೆ, ಉಜ್ವಲಾ ಯೋಜನೆ, ಆಯುಷ್ಮಾನ್ ಭಾರತ್, ಪ್ರಧಾನಮಂತ್ರಿ ಆವಾಸ್ ಯೋಜನೆ, ಉಚಿತ ಆಹಾರ ಧಾನ್ಯ ವಿತರಣೆ ಸೇ–ರಿದಂತೆ ವಿವಿಧ ಯೋಜನೆಗಳು ಕೋಟ್ಯಾಂತರ ಜನರಿಗೆ ನೇರ ಪ್ರಯೋಜನವನ್ನು ಒದಗಿಸಿವೆ.

ಡಿಬಿಟಿ ವ್ಯವಸ್ಥೆಯ ಮೂಲಕ ಫಲಾನುಭವಿಗಳಿಗೆ ಮಧ್ಯವರ್ತಿಗಳ ಹಾವಳಿ ಇಲ್ಲದೆ ನೇರವಾಗಿ ನೆರವು ತಲುಪುತ್ತಿರುವುದು ಕೇಂದ್ರ ಸರ್ಕಾರದ ಆಡಳಿತ ದಕ್ಷತೆಗೆ ಸಾಕ್ಷಿಯಾಗಿದೆ ಎಂದು ತಿಳಿಸಿದರು. ಭಾರತದ ಅಂತರರಾಷ್ಟ್ರೀಯ ಗೌರವವೂ ಗಣನೀಯವಾಗಿ ಹೆಚ್ಚಿದ್ದು, ಜಿ–20 ಅಧ್ಯಕ್ಷತೆ, ಅಂತರರಾಷ್ಟ್ರೀಯ ಸೌರ ಒಕ್ಕೂಟ, ಕ್ವಾಡ್ ಸಹಕಾರ ಸೇರಿದಂತೆ ವಿವಿಧ ಜಾಗತಿಕ ವೇದಿಕೆಗಳಲ್ಲಿ ಭಾರತ ಪ್ರಮುಖ ಪಾತ್ರ ವಹಿಸುತ್ತಿದೆ. ಅಭಿವೃದ್ಧಿ, ಜನಕಲ್ಯಾಣ ಹಾಗೂ ಸುಶಾಸನದ ಮೂಲಕ ದೇಶವನ್ನು ವಿಶ್ವಗುರುವಾಗಿಸುವ ಸಂಕಲ್ಪದೊಂದಿಗೆ ಕೇಂದ್ರ ಸರ್ಕಾರ ಕಾರ್ಯನಿರ್ವಹಿಸುತ್ತಿದೆ ಎಂದು ಅವರು ಹೇಳಿದರು. ಈ ಸಂಧರ್ಭದಲ್ಲಿ, ರಾಜ್ಯ ಕಾರ್ಯಕಾರ್ಣಿ ಸದಸ್ಯ ಡಾ. ಬಸವರಾಜ ಕ್ಯಾವಟ–ರ, ಜಿಲ್ಲಾ ಅಧ್ಯಕ್ಷ ನವೀನ ಗುಳಗನ್ನವರ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸುನೀಲಕುಮಾರ ಹೆಸರೂರ, ಇನ್ನಿತರರು ಉಪಸ್ಥಿತರಿದ್ದರು.

AJATHA SHATHRU KANNADA DAILY MORNING Editor, Printer, Publisher, & Owned by : PRADEEP KUMAR H.No. 2/77/1, Godi nilaya, Halli street, 1st ward,Mainahalli, Koppal-583238, Dist : Koppal- Karnataka Printed at : Goditechnologies, H.No. 2/77/1, Godi nilaya, Halli street, 1st ward,Mainahalli, Koppal-583238, Karnataka